ಓ.ಎಸ್‌ಃ 89/2023

ಪಿ.ಡಬ್ಲ್ಯೂಃ 01

**<u>ದಿನಾಂಕಃ 24-11-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಲಾಯಿತು</u>**

**<u>ವಾದಿಯ ಮುಖ್ಯವಿಚಾರಣೆ ಶ್ರೀ.ಸಿ.ಆರ್.ಎಸ್ ವಕೀಲರಿಂದಃ-</u>**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿ ಬರೆದಿರುವ ಸಂಗತಿಗಳು ಸತ್ಯವಾಗಿರುತ್ತವೆ. ಸದರಿ ಸಂಗತಿಗಳನ್ನು ನಾನೇ ಹೇಳಿ ಬರೆಸಿರುತ್ತೇನೆ ಅದರಲ್ಲಿ ಬರೆದಿರುವ ಸಂಗತಿಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ನ್ಯಾಯಾಲಯಕ್ಕೆ ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಈ ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಗಿದೆ.

1. 4 ಮನೆಯ ಉತಾರೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ 4 ಎಂದು,
2. 4 ತೆರಿಗೆ ಪಾವತಿ ರಶಿದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-5 ರಿಂದ 8 ಎಂದು,
3. ನೋಟಿಸ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು,
4. ತೆರಿಗೆ ಪಾವತಿ ರಶಿದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-10 ರಿಂದ 16 ಎಂದು,
5. ಲಿಗಲ್ ನೋಟಿಸ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-17 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ ಸಮಯಾವಕಾಶ ನೀಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಅದೆ.**

**(ಶ್ರೀ ಅಮಿತ್ ಘಟ್ಟಿ)**

**ದಿವಾಣಿ ನ್ಯಾಯಾಧೀಶರು ಮತ್ತು**

**ನ್ಯಾಯಿಕ ದಂಡಾಧಿಕಾರಿಗಳು**

**ಬಸವನ ಬಾಗೇವಾಡಿ.**